ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಗಿದೆ.

ಆ) ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಹಾಗೂ ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ವಿಧೇಯಕ 2011

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು): (ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಹಾಗೂ ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು. ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2011ನೇ ಸಾಲಿನ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಹಾಗೂ ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಸಚಿವರು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು):

(ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಹಾಗೂ ನಿರ್ವಹಣೆಯ ವಿನಿಯಮನ ಹಾಗೂ ನಿಯಂತ್ರಣ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ. ** ಅನುಬಂಧ–III

ಅನುಬಂಧ

ಅಧ್ಯಕ್ಷರು: ಈಗ ಸದನವನ್ನು ದಿನಾಂಕ: 03.03.2011ರಂದು ಗುರುವಾರ ಬೆಳಿಗ್ಗೆ 11.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು 4 ಗಂಟೆ 43 ನಿಮಿಷಕ್ಕೆ ಮುಕ್ತಾಯಗೊಂಡು
ದಿನಾಂಕ: 03.03.2011ರಂದು ಬೆಳಿಗ್ಗೆ 11.00 ಗಂಟೆಗೆ
ಸಮಾವೇಶಗೊಳ್ಳಲು ನಿಶ್ಚಯಿಸಿತು)

7. ಅನುಬಂಧ–I

ಪ್ರವಾಸಿ ತಾಣಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆ

110 (371) ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸರ್ಕಾರ ಇದುವರೆವಿಗೂ ಯಾವ ಯಾವ ಸ್ಥಳಗಳನ್ನು ಪ್ರವಾಸಿ ತಾಣಗಳೆಂದು ಗುರುತಿಸಲಾಗಿದೆ; (ವಿವರಗಳನ್ನು ನೀಡುವುದು)

ಆ) ಈಗ ಗುರುತಿಸಿರುವ ಪ್ರವಾಸಿ ತಾಣಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಪ್ರವಾಸಿ ತಾಣಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

ಈ) ನಂದಿ ಬೆಟ್ಟಕ್ಕೆ ರಾತ್ರಿ ವೇಳೆ ಬರುವ ಪ್ರವಾಸಿಗರಿಗೆ ವಾಸ್ತವ್ಯ ಹೂಡಲು ಸಾಕಷ್ಟು ವಸತಿ ಗೃಹಗಳಿಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;